2010–11 ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಜೂರು ಮಾಡುವ ವಿಚಾರ

93 (332) ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) 2010–11ನೇ ಸಾಲಿನಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಜೂರು ಮಾಡುವ ವಿಚಾರ ಸರ್ಕಾರದ ಮುಂದಿದೆಯೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಹಾಲಿ ಮಂಜೂರಾಗಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸುವವರೆಗೆ ಯಾವುದೇ ಹೊಸ ಕಾಲೇಜುಗಳನ್ನು ಮಂಜೂರು ಮಾಡದಿರಲು ಸರ್ಕಾರ ತೀರ್ಮಾನಿಸಿರುತ್ತದೆ. ಆದುದರಿಂದ 2010–11ನೇ ಸಾಲಿನಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಉದ್ದೇಶವಿರುವುದಿಲ್ಲ.

ಶ್ರೀ ಪ್ರತಾಪಗೌಡ ಪಾಟೀಲ್ : ಮಾನ್ಯ ಅಧ್ಯಕ್ಷರೆ, 2010–11ನೇ ಸಾಲಿನಲ್ಲಿ ಯಾವುದೇ ಹೊಸ ಪದವಿ ಪೂರ್ವ ಕಾಲೇಜುಗಳನ್ನು ಕೊಡವುದಿಲ್ಲವೆಂದು ಉತ್ತರ ಒದಗಿಸಿದ್ದಾರೆ. ನಮ್ಮ ಜಿಲ್ಲೆ ಶಿಕ್ಷಣ ಕ್ಷೇತ್ರದಲ್ಲಿ ಅತ್ಯಂತ ಹಿಂದುಳಿದಿರುವಂತಹ ಜಿಲ್ಲೆ. ಈಗ ಅಲ್ಲಿರುವಂತಹ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಅಲ್ಲಿ ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳು ಬಹಳಷ್ಟು ಕಡಿಮೆ ಇರುವುದರಿಂದ, ವಿದ್ಯಾರ್ಥಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಹೆಚ್ಚಿನ ಪ್ರೌಢಶಾಲೆಗಳನ್ನು ಮತ್ತು ಪದವಿಪೂರ್ವ ಕಾಲೇಜುಗಳನ್ನು ಮಂಜೂರು ಮಾಡಬೇಕೆಂದು ವಿನಂತಿಸಿ ಕೊಳ್ಳುತ್ತೇನೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ಮಾನ್ಯ ಅಧ್ಯಕ್ಷರೆ, ಶ್ರೀಯುತ ಪ್ರತಾಪಗೌಡ ಪಾಟೀಲ್‌ರವರು ಇವತ್ತು ಹೊಸ ಜೂನಿಯರ್ ಕಾಲೇಜುಗಳು ಬೇಕೆನ್ನುವಂತಹ ಅಪೇಕ್ಷೆಯನ್ನು ವ್ಯಕ್ತಪಡಿಸಿ ಈ ಪ್ರಶ್ನೆಯನ್ನು ಕೇಳಿದ್ದಾರೆ. ಆದರೆ ನಾವು ಕಳೆದ ಕೆಲವು ವರ್ಷಗಳಿಂದ 2006–07ರಲ್ಲಿ 199 ಕಾಲೇಜುಗಳು ಮತ್ತು 2007–08ರಲ್ಲಿ 293 ಕಾಲೇಜುಗಳನ್ನು ಇಡೀ ರಾಜ್ಯದಲ್ಲಿ ಪ್ರಾರಂಭ ಮಾಡಿದ್ದೇವೆ. ಅದಕ್ಕೆ ಮೂಲಭೂತ ಸೌಕರ್ಯಗಳನ್ನು

ಕೊಡುವಂತಹ ಎಲ್ಲಾ ಪ್ರಯತ್ನವನ್ನೂ ನಮ್ಮ ಸರ್ಕಾರದಲ್ಲಿ ಕಳೆದ ಎರಡು ವರ್ಷಗಳಿಂದ ಬಹಳ ಬಲವಾಗಿ ಬೇರೆ ಬೇರೆ ಯೋಜನೆ ಅಡಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಕೊಡುವಂತಹ ಪ್ರಯತ್ನವನ್ನು ಮಾಡುತ್ತಿದ್ದೇವೆ. ಅದರ ಜೊತೆಯಲ್ಲಿ ನಾನು ಕಳೆದ ವಾರ ಅಷ್ಟೇ ಈ ಸದನದಲ್ಲಿ ಹೇಳಿದ ಹಾಗೆ ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳನ್ನು ನಾವು ದೊಡ್ಡ ಪ್ರಮಾಣದಲ್ಲಿ ರಾಜ್ಯದ ಜೂನಿಯರ್ ಕಾಲೇಜುಗಳಲ್ಲಿ ತೆಗೆಯುವುದಕ್ಕೆ ನಾವು ಅವಕಾಶಗಳನ್ನು ಮಾಡಿಕೊಡುತ್ತಿದ್ದೇವೆ. ಸುಮಾರು 437 ವಿಜ್ಞಾನ ಮತ್ತು ಸುಮಾರು 210 ವಾಣಿಜ್ಯ ವಿಭಾಗಗಳನ್ನು ತೆಗೆಯುವುದಕ್ಕೆ ಅವಕಾಶ ಮಾಡಿಕೊಡುತ್ತಿದ್ದೇವೆ. ಬರುವಂತಹ ದಿನಗಳಲ್ಲಿ ಶ್ರೀಯುತ ಪ್ರತಾಪಗೌಡ ಪಾಟೀಲ್‌ರವರು ಕೇಳುತ್ತಿರುವ ಸ್ಥಳದಲ್ಲಿ ಜ್ಯೂನಿಯರ್ ಕಾಲೇಜನ್ನು ಕೊಡುವುದರ ಬಗ್ಗೆ ಪರಿಶೀಲನೆ ಮಾಡಿ ಕ್ರಮ ತೆಗೆದುಕೊಳ್ಳುತ್ತೇವೆ.

ರಾಜ್ಯದಲ್ಲಿ ಕುಡಿಯುವ ನೀರಿಗಾಗಿ ಸಮಿತಿ ರಚಿಸಿರುವ ಬಗ್ಗೆ

94 (1337) ಶ್ರೀ ಕೆ.ಎಂ. ಶಿವಲಿಂಗೇಗೌಡ (ಅರಸೀಕೆರೆ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯಾದ್ಯಂತ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಬಹಳ ಅವಶ್ಯಕತೆಯಿರುವ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿಗಾಗಿ ಸಮಿತಿ ರಚಿಸಲಾಗಿದ್ದು, ಆ ಸಮಿತಿ ಅಸ್ಥಿತ್ವದಲ್ಲಿದೆಯೇ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಸಮಿತಿಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು;

ಇ) ಸಮಿತಿಯನ್ನು ಮುಂದುವರೆಸುವ ಇಚ್ಛೆ ಸರ್ಕಾರಕ್ಕಿದೆಯೇ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಇದೆ.

ಆ) ರೂ.35.20 ಕೋಟಿ ಅನುದಾನವನ್ನು ಶಾಸಕರ ಅಧ್ಯಕ್ಷತೆಯಲ್ಲಿರುವ ಟಾಸ್ಕ್ ಫೋರ್ಸ್ ಸಮಿತಿಗಳಿಗೆ ಬಿಡುಗಡೆ ಮಾಡಲಾಗಿದೆ. ಇದಲ್ಲದೆ, ಬರಪೀಡಿತ 86–ತಾಲ್ಲೂಕುಗಳಲ್ಲಿ ಕೈಗೊಂಡ ಕುಡಿಯುವ ನೀರಿನ ಕಾಮಗಾರಿಗಳನ್ನು ಟಾಸ್ಕ್ ಫೋರ್ಸ್ ಸಮಿತಿ ಶಿಫಾರಸ್ಸಿನಂತೆ ಅನುಷ್ಠಾನ